ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಲಾಕ್‌ಡೌನ್ ಸಮಯದಲ್ಲಿ ರೈತರಿಗೆ ಪರಿಹಾರ ನೀಡಲಾಗಿರುವ ಬಗ್ಗೆ

ಶ್ರೀ ವಿಜಯ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

728 (806) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲಾಕ್‌ಡೌನ್ ಸಮಯದಲ್ಲಿ ಹೂ, ತರಕಾರಿ ಬೆಳೆದು ನಷ್ಟಕ್ಕೊಳಗಾದ ರೈತರಿಂದ ಪರಿಹಾರಕ್ಕಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ; ಇನ್ನೂ ಎಷ್ಟು ಜನರಿಗೆ ಪರಿಹಾರ ನೀಡಬೇಕಿದೆ; ತಾಲ್ಲೂಕುವಾರು ಮಾಹಿತಿ ನೀಡುವುದು; ಪರಿಹಾರ ನೀಡುವಲ್ಲಿ ವಿಳಂಬವಾಗಲು ಕಾರಣವೇನು;

(ಆ) ಬೀದರ್ ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್ ಪ್ರದೇಶ ಹನಿ ನೀರಾವರಿ ಇದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹನಿ ನೀರಾವರಿಗಾಗಿ ಅರ್ಜಿ ಸಲ್ಲಿಸಿದ್ದರೂ ವಿಳಂಬವಾಗುತ್ತಿದ್ದು ಸರ್ಕಾರವು ವಿಳಂಬ ನಿವಾರಣೆ ಮಾಡಲು ಕ್ರಮವಹಿಸುವುದೇ?